# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 1239 |
| **ಉತ್ತರಿಸಬೇಕಾದ ದಿನಾಂಕ** | : 21.12.2018. |
| **ಸದಸ್ಯರ ಹೆಸರು** | : ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ಸಚಿವರು** | : ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನೆಹರು ಕ್ರೀಡಾಂಗಣದ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ; | ಬೀದರ್ ನಗರದಲ್ಲಿರುವ ಜಿಲ್ಲಾ ಕ್ರೀಡಾಂಗಣವು ಶಿಥಿಲಗೊಂಡಿದ್ದ ಹಿನ್ನೆಲೆಯಲ್ಲಿ ಪುನರ್-ನಿರ್ಮಾಣ ಕಾಮಗಾರಿಯನ್ನು ಒಟ್ಟು ರೂ.387.00 ಲಕ್ಷ ವೆಚ್ಚದಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕೈಗೆತ್ತಿಕೊಳ್ಳಲಾಗಿದ್ದು, ಇದುವರೆಗೆ ಎರಡು ಕಂತುಗಳಲ್ಲಿ ಒಟ್ಟು ರೂ.373.28 ಲಕ್ಷ ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಕ್ರೀಡಾಂಗಣದ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ; ಈ ಕ್ರೀಡಾಂಗಣ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು? (ವಿವರ ನೀಡುವುದು) | ಬೀದರ್ ನಗರದಲ್ಲಿರುವ ಜಿಲ್ಲಾ ಕ್ರೀಡಾಂಗಣವು ಶಿಥಿಲಗೊಂಡಿದ್ದ ಹಿನ್ನೆಲೆಯಲ್ಲಿ ಪುನರ್-ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, 04 ಗ್ಯಾಲರಿಗಳ ನಿರ್ಮಾಣ ಪೂರ್ಣಗೊಂಡಿರುತ್ತದೆ. ಆವರಣ ಗೋಡೆ ಮತ್ತು ಚೈನ್‌ಲಿಂಕ್ ಬೇಲಿ ನಿರ್ಮಾಣ ಪೂರ್ಣಗೊಂಡಿದೆ. ಹಳೆಯ ಪೆವಿಲಿಯನ್ ಕಟ್ಟಡದ ದುರಸ್ಥಿ ಮತ್ತು ಉನ್ನತೀಕರಣ ಕಾಮಗಾರಿ ಪ್ರಗತಿಯಲ್ಲಿದೆ.<br><br>ಬೀದರ್ ನಗರದ ನೆಹರು ಕ್ರೀಡಾಂಗಣದ ಪುನರ್-ನಿರ್ಮಾಣ ಕಾಮಗಾರಿಗೆ ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆಯು ನಿರ್ಮಾಣ ಏಜೆನ್ಸಿಯಾಗಿದ್ದು, ಈಗಾಗಲೇ ರೂ.373.28 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಮೊತ್ತದಲ್ಲಿ ಇದುವರೆಗೆ ರೂ.185.00 ಲಕ್ಷಗಳನ್ನು ವೆಚ್ಚ ಭರಿಸಲಾಗಿದೆ. |

ಸಂಖ್ಯೆ: ಯುಸೇಇ 100 ಯುಸೇಭಾ 2018.

(ಡಾ|| ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ.